ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 12.06.2019 ಮತ್ತು 13.06.2019 ರಂದು ನಡೆದ ಪ್ರಾದೇಶಿಕ ಆಯುಕ್ತರುಗಳು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಮ್ಮೇಳನ ಸಭೆಯ ನಡವಳಿಗಳು:

(ಸಭೆಯಲ್ಲಿ ಹಾಜರಿದ್ದ ಸಚಿವರುಗಳು ಹಾಗೂ ಅಧಿಕಾರಿಗಳ ಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ).

ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ಸಭೆಗೆ ಸ್ವಾಗತಿಸಿ, ಈ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಮುಖ್ಯಮಂತ್ರಿಯವರನ್ನು ಕೋರಿದರು.

I

1 ಸನ್ಮಾನ್ಯ ಮುಖ್ಯ ಮಂತ್ರಿಗಳು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಇದುವರೆಗೆ ಸರ್ಕಾರ ಆಡಳಿತಕ್ಕೆ ಬಂದ ನಂತರ ಜಿಲ್ಲಾಧಿಕಾರಿಗಳು ಹಾಗೂ ಕಾರ್ಯನಿರ್ವಾಹಣಾಧಿಕಾರಿಗಳೊಂದಿಗೆ ಮೂರು ಬಾರಿ ಸಭೆಗಳನ್ನು ನಡೆಸಿದ್ದು ವಿಶೇಷವಾಗಿರುತ್ತದೆ. ಪ್ರಸ್ತುತ ರಾಜ್ಯದಲ್ಲಿ ಕಂಡು ಬರುತ್ತಿರುವ ನೈಸರ್ಗಿಕ ವಿಕೋಪ ಹಾಗೂ ಬರಗಾಲದ ಸಮಸ್ಯೆ, ಮುಂಗಾರು ಮಳೆ ಕೊರತೆ, ಮೇವು ಮತ್ತು ನೀರಿನ ಕೊರತೆ ಎದುರಿಸುತ್ತಿದ್ದು ಇದಕ್ಕೆ ಎಲ್ಲಾ ಜಿಲ್ಲಾಧಿಕಾರಿಗಳು ಪೂರ್ವಭಾವಿಯಾಗಿ ಪರಿಹಾರ ಕಾರ್ಯವನ್ನು ಕೈಗೊಳ್ಳುವಂತೆ ತಿಳಿಸಲಾಯಿತು

2 ವಿಶೇಷವಾಗಿ ರೈತರ ಸಾಲ ಮನ್ನಾ ಮಾಡಲು ಫಲಾನುಭವಿಗಳನ್ನು ಗುರುತಿಸುವಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಮಾರ್ಗದರ್ಶನದ ಮೇರೆಗೆ ಅತ್ಯಂತ ಯಶಸ್ವಿಯಾಗಿ ಪರಿಹಾರ ಕಾರ್ಯಗಳನ್ನು ಸರ್ಕಾರದ ಹಣ ದುರುಪಯೋಗವಾಗದಂತೆ ರೈತನಿಗೆ ನೇರವಾಗಿ ತಲುಪಿಸುವಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಅತ್ಯುತ್ತಮ ಕೆಲಸ ನಿರ್ವಹಿಸಿದ್ದೀರೆಂದು ಹೆಮ್ಮೆ ವ್ಯಕ್ತಪಡಿಸಲಾಯಿತು.

3. ಸರ್ಕಾರದ ಕೆಲಸವನ್ನು ಮತ್ತಷ್ಟು ಚುರುಕುಗೊಳಿಸಲು ಮತ್ತು ಹಳ್ಳಿಯವರ ಜೊತೆಗೂಡಿ ಅವರ ಸಮಸ್ಯೆಗಳನ್ನು ಬಗೆಹರಿಸಲು ಗ್ರಾಮ ವಾಸ್ತವ್ಯ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಲಾಯಿತು.

4. ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಕಡ್ಡಾಯವಾಗಿ ಕ್ಷೇತ್ರ ತಪಾಸಣೆಯನ್ನು ಕೈಗೊಂಡು ಅಭಿವೃದ್ಧಿ ಕಾಮಗಾರಿಗಳು, ಬರಪರಿಹಾರ ಕಾಮಗಾರಿಗಳು, ಜನರ ಕುಂದು ಕೊರತೆಗಳನ್ನು ಪರಿಶೀಲಿಸಿ ಪರಿಹರಿಸಲು ಕ್ರಮ ಕೈಗೊಳ್ಳುವುದು ಈ ಸಂದರ್ಭದಲ್ಲಿ ಎಲ್ಲಾ ಗ್ರಾಮ ಪಂಚಾಯ್ತಿ ಕಛೇರಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳಿಗೆ ತಪ್ಪದೇ ಭೇಟಿ ನೀಡುವುದು ಹಾಗೂ ಮಾಸಿಕ ವರದಿಗಳನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸುವುದು

II. 5. <u>ಸಭೆಯ ಕಾರ್ಯಸೂಚಿಯ ಪ್ರಕಾರ ವಿವಿಧ ಇಲಾಖಾ ಪ್ರಗತಿ ಪರಿಶೀಲನೆ ಬಗ್ಗೆ ವಿಸ್ತೃತವಾಗಿ ಚರ್ಚಿಸಿ ಎಲ್ಲಾ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಈ ಕೆಳಕಂಡಂತೆ ಸೂಚನೆ ನಿರ್ದೇಶನಗಳನ್ನು ನೀಡಲಾಗಿದೆ.</u>

**ಸನ್ಮಾನ್ಯ ಉಪ ಮುಖ್ಯಮಂತ್ರಿಯವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಕೆಳಕಂಡಂತೆ ಸೂಚನೆ / ನಿರ್ದೇಶನಗಳನ್ನು ನೀಡಿದರು.**

6 ಆಡಳಿತ ಚುರುಕುಗೊಳಿಸಬೇಕು ಮನೆ ಕಟ್ಟಿಸಿದವರಿಗೆ ಶೀಘ್ರ ಬಿಲ್ಲು ಪಾವತಿ ಆಗಬೇಕು BPL ಕುಟುಂಬಗಳಿಗೆ ಶೇ.80% - 90% ಇರುವುದರ ಬಗ್ಗೆ ಪರಿಶೀಲಿಸಬೇಕು ಗ್ರಾಮಗಳಿಗೆ ಭೇಟಿ ನೀಡಬೇಕು

7 ಜಿಲ್ಲಾ ಮಟ್ಟದಲ್ಲಿ ದೌರ್ಜನ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಜಾಗೃತಿ ಸಮಿತಿ ಸಭೆಗಳನ್ನು ನಡೆಸದೇಯಿರುವ ಜಿಲ್ಲಾಧಿಕಾರಿಗಳ ವಿಫಲತೆಯ ಬಗ್ಗೆ ವಿಷಾಧ ವ್ಯಕ್ತಪಡಿಸಲಾಯಿತು ಸಮಿತಿ ಸಭೆಗಳನ್ನು ಕಾಲಕಾಲಕ್ಕೆ ನಡೆಸುವಂತೆ ತಿಳಿಸಿದರು

8. ತಾಲ್ಲೂಕು, ಹೋಬಳಿ ಮತ್ತು ಜಿಲ್ಲಾ ಮಟ್ಟದಲ್ಲಿ ಸಮುದಾಯ ಭವನವನ್ನು ನಿರ್ಮಿಸಲು ಸಲ್ಲಿಸುತ್ತಿರುವ ಪ್ರಸ್ತಾವನೆಗಳಲ್ಲಿ ಯೂನಿಟ್ ಕಾಸ್ಟ್ ಹೆಚ್ಚಾಗುತ್ತಿದ್ದು, ಹೆಚ್ಚಿನ ಅನುದಾನದ ಅವಶ್ಯಕತೆಯಿರುವುದರಿಂದ ಹೆಚ್ಚಿನ ಅನುದಾನಕ್ಕಾಗಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಿದರು

***<u>ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)</u>***

9. ರಾಜ್ಯದಲ್ಲಿ ಸತತವಾಗಿ ಬರಗಾಲ ತಲೆದೋರುತ್ತಿರುವ ಹಿನ್ನಲೆಯಲ್ಲಿ ಹಾಗೂ ಅಂತರ್‌ಜಲ ಮಟ್ಟ ಕುಸಿಯುತ್ತಿರುವ ಹಿನ್ನಲೆಯಲ್ಲಿ <u>ಜಲಾಮೃತ, ಜಲ ಸಂರಕ್ಷಣೆ ಹಾಗೂ ಜನಜಾಗೃತಿ ಕಾರ್ಯಕ್ರಮವನ್ನು ಆಂದೋಲನದ ಮಾದರಿಯಲ್ಲಿ</u> ರೂಪಿಸುವ ಅವಶ್ಯಕತೆಯಿದೆ

10. <u>ಜಲಾಶಯಗಳು</u> ತುಂಬದೆ ಒಟ್ಟಾರೆ ಶೇ 74ರಷ್ಟು ನೀರಿನ ಕೊರತೆ ಉಂಟಾಗಿದ್ದು, ಅಂತರ್‌ಜಲ ಕುಸಿದಿದೆ ಈ ಹಿನ್ನಲೆಯಲ್ಲಿ <u>ಮಳೆನೀರು ಸಂಗ್ರಹಣೆಗೆ ಬದು</u> ನಿರ್ಮಾಣ ಮಾಡುವ ಬಗ್ಗೆ ಹೆಚ್ಚಿನ ಆದ್ಯತೆ ನೀಡುವುದು ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ <u>ಚೆಕ್ ಡ್ಯಾಮ್</u> ಮತ್ತು ಇತರೆ <u>ಮಳೆನೀರು ಸಂಗ್ರಹಣೆ ಕಾಮಗಾರಿಗೆ</u> ಉತ್ತೇಜನ ನೀಡುವುದು.

11. ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು <u>High Yielding ಬೋರ್‌ವೆಲ್‌ಗಳನ್ನು ಗುರುತಿಸಿ</u> ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಂಡು ನೀರು ಸರಬರಾಜು ಮಾಡುವುದು ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ <u>ಕೊಳವೆ ಬಾವಿ</u>

ಕೊರೆಯುವುದು ಕಟ್ಟಕಡೆಯ ಆಯ್ಕೆಯಾಗಿರಬೇಕು ಎಂದು ನಿರ್ದೇಶನ ನೀಡಿದೆ

12. ಎಸ್.ಡಿ.ಆರ್ ಎಫ್ ಮಾರ್ಗಸೂಚಿಗಳಲ್ಲಿದ್ದ ಹಲವು ನಿಬಂಧನೆಗಳನ್ನು ಸಡಿಲಗೊಳಿಸಲಾಗಿದೆ. ಆದ್ದರಿಂದ ಅನುಮೋದನೆಯಾಗಿರುವ ಕಾಮಗಾರಿಗಳನ್ನು ಬೇಗ ಪೂರೈಸಿ ಅನುದಾನದ ಸದ್ಬಳಕೆ ಮಾಡಿಕೊಳ್ಳುವುದು

13. ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿದ ಬಿಲ್ಲುಗಳನ್ನು 15 ದಿನಗಳೊಳಗಾಗಿ ಪಾವತಿಸಲು ಕ್ರಮ ಕೈಗೊಳ್ಳುವುದು ನೀರು ಪೂರೈಕೆ ಟ್ಯಾಂಕರ್‌ಗಳಿಗೆ ಜಿ.ಪಿ ಎಸ್ ಅಳವಡಿಕೆಯನ್ನು ಕಡ್ಡಾಯಗೊಳಿಸುವುದು

14. 2018ನೇ ಮುಂಗಾರು ಬರದಿಂದ ಆದ ಬೆಳೆಹಾನಿಗೆ ಸಂಬಂಧಿಸಿದಂತೆ ಇನ್‌ಪುಟ್ ಸಬ್ಸಿಡಿಯನ್ನು ಆಧಾರ್ ಅನುದಾನಿತ ಪಾವತಿ ವ್ಯವಸ್ಥೆ ಮೂಲಕ ನೇರವಾಗಿ ರೈತರ ಬ್ಯಾಂಕ್ ಖಾತೆಗಳಿಗೆ ಪಾವತಿಸಲು ಅನುಕೂಲವಾಗುವಂತೆ ಆಧಾರ್ ಸೀಡಿಂಗ್‌ನ್ನು ಮುಂದಿನ 3 ದಿನಗಳೊಳಗಾಗಿ ಪೂರ್ಣಗೊಳಿಸುವುದು

***ಕಂದಾಯ ಇಲಾಖೆ***

15. ಹೋಬಳಿ ಮಟ್ಟದಲ್ಲಿ ಕಡ್ಡಾಯವಾಗಿ ಕಂದಾಯ ಅದಾಲತ್ ಮತ್ತು ಪಿಂಚಣಿ ಅದಾಲತ್‌ಗಳನ್ನು ನಡೆಸಿ ವೃದ್ಧಾಪ್ಯ, ವಿಧವಾ, ಅಂಗವಿಕಲ, ಮನಸ್ವಿನಿ, ಮೈತ್ರಿ ಮತ್ತು ಸಂಧ್ಯಾ ಸುರಕ್ಷಾ ಪಿಂಚಣಿ ಸಂಬಂಧಿಸಿದವರಿಗೆ ಸರಿಯಾಗಿ ತಲುಪುತ್ತಿದೆಯೇ ಎಂಬುದನ್ನು ಪರಿಶೀಲಿಸಿ ಬ್ಯಾಂಕ್ ಖಾತೆಗಳನ್ನು ತೆರೆದು ನೇರವಾಗಿ ಅವರ ಖಾತೆಗೆ ಜಮೆ ಮಾಡುವ ಸೌಲಭ್ಯವನ್ನು ಕಲ್ಪಿಸಲು ಕ್ರಮವಹಿಸುವುದು

16. ವೃದ್ಧರು ಮತ್ತು ವಿಧವೆಯರನ್ನು ಗುರುತಿಸಲು ಮನೆ ಮನೆ ಸಮೀಕ್ಷೆ ಮಾಡಿ ವೃದ್ಧಾಪ್ಯ ವೇತನ ನೀಡುವ ಕಾರ್ಯವನ್ನು ಉತ್ತರ ಕನ್ನಡ ಜಿಲ್ಲೆಯಲ್ಲಿ ಯಶಸ್ವಿಯಾಗಿ ನಿರ್ವಹಿಸಿದ್ದು, ಈ ಪ್ರಯತ್ನವನ್ನು ಇತರೆ ಜಿಲ್ಲೆಯ ಜಿಲ್ಲಾಧಿಕಾರಿಗಳು ಸಹ ಕೈಗೊಳ್ಳುವುದು ಈ ಕಾರ್ಯಕ್ಕೆ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತರ ಸೇವೆಯನ್ನು ಹಾಗೂ ಅಗತ್ಯವಿದ್ದಲ್ಲಿ ನಿವೃತ್ತ ಅಂಗನವಾಡಿ ಕಾರ್ಯಕರ್ತರ ಸೇವೆಯನ್ನು ಬಳಸಿಕೊಳ್ಳುವುದು.

17 ಭೂ ಪರಿವರ್ತನೆ ಮತ್ತು ಇತರ ಕಂದಾಯ ವಿಷಯಗಳಿಗೆ ಸಂಬಂಧಿಸಿದ ವಿಷಯಗಳನ್ನು ಹಾಗೂ ಕೈಗಾರಿಕೆಗಳಿಗೆ ಭೂ ಪರಿವರ್ತನೆಗೆ ಸಂಬಂಧಿಸಿದ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವುದು

18. ಸರ್ಕಾರಿ ಶಾಲೆ, ಆಟದ ಮೈದಾನ, ಸ್ಮಶಾನ ಮುಂತಾದ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರಕ್ಕೆ ಮುಂದಿನ 10 ವರ್ಷಗಳ ಅವಧಿಗೆ ಅವಶ್ಯವಿರುವ ಜಮೀನುಗಳನ್ನು

ಗುರುತಿಸಿ ಕಾಯ್ದಿರಿಸಲು ಕ್ರಮಕೈಗೊಳ್ಳುವುದು

19. ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿಯವರಿಗಾಗಿ ಸ್ಮಶಾನ ಭೂಮಿಯನ್ನು ಒದಗಿಸದೇಯಿರುವ ಬಗ್ಗೆ ಗಮನಿಸಿದ್ದು, ಸರ್ಕಾರಿ ಭೂಮಿ ಲಭ್ಯವಿಲ್ಲದಿದ್ದಲ್ಲಿ, ಖಾಸಗಿ ಜಮೀನುಗಳನ್ನು ಖರೀದಿಸಿ ಒದಗಿಸಲು ಕ್ರಮ ಕೈಗೊಳ್ಳುವುದು.

20 94-ಸಿ ಮತ್ತು 94 ಸಿಸಿ, 94-ಎ ಮತ್ತು 94-ಬಿ ರಡಿ ಸ್ವೀಕರಿಸಿದ ಅರ್ಜಿಗಳನ್ನು ಗ್ರಾಮವಾರು ವಿಲೇವಾರಿ ಮಾಡಲು ಕ್ರಮವಹಿಸುವುದು ಕರ್ನಾಟಕ ಭೂ ಸುಧಾರಣಾ ಕಾಯ್ದೆಯಡಿ ಬಾಕಿಯಿರುವ ಕಡತಗಳನ್ನು ಕೂಡಲೇ ವಿಲೇವಾರಿ ಮಾಡಲು ಕ್ರಮವಹಿಸುವುದು

21. ಅರಣ್ಯ ಹಕ್ಕು ಕಾಯ್ದೆಯಡಿ ಬಾಕಿ ಇರುವ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುವುದು.

22. ಸಮಾಜ ಕಲ್ಯಾಣ/ ಹಿಂದುಳಿದ ವರ್ಗಗಳ ಕಲ್ಯಾಣ / ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳ ನಿರ್ಮಾಣಕ್ಕೆ ಅಗತ್ಯವಿರುವ ನಿವೇಶನಗಳ ಮಂಜೂರಾತಿಯನ್ನು ತ್ವರಿತಗೊಳಿಸಲು ಕ್ರಮವಹಿಸುವುದು

***ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ***

23. ಜಲಾಮೃತ ಯೋಜನೆಯಡಿಯಲ್ಲಿ ಈ ವರ್ಷ "ಜಲ ವರ್ಷ" ಎಂದು ಘೋಷಿಸಲಾಗಿದೆ ಈ ಯೋಜನೆಯು ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾಗಿದ್ದು, ಶಾಶ್ವತ ಪರಿಹಾರ ಕಾರ್ಯಕ್ರಮವಾಗಿದೆ ಈ ವರ್ಷ 20,000 ಚೆಕ್ ಡ್ಯಾಮ್ ಗಳನ್ನು ನರೇಗಾ ಯೋಜನೆಯಡಿ ನಿರ್ಮಾಣ ಮಾಡಲು, ಮಳೆನೀರು ಕೊಯ್ಲು ಪದ್ಧತಿ ಅಳವಡಿಸಿಕೊಳ್ಳಲು, ಗ್ರಾಮ ಪಂಚಾಯಿತಿಗಳು ಹಾಗೂ ಸರ್ಕಾರಿ ಕಛೇರಿ ಆವರಣದಲ್ಲಿ ಗಿಡ ನೆಡುವುದು, ಕೆರೆ ಹೂಳನ್ನು ರೈತರ ಸಹಭಾಗಿತ್ವದಲ್ಲಿ ತೆಗೆಯುವುದು, ಶುದ್ಧ ಕುಡಿಯುವ ನೀರಿನ ಘಟಕದ ನಿರ್ವಹಣೆ ಮಾಡುವ ಗುರಿ ಹೊಂದಿದ್ದು, ಸರ್ಕಾರದಿಂದ ನೀಡಿರುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಕಾರ್ಯನಿರ್ವಹಿಸುವಂತೆ ಸೂಚಿಸಿದೆ

24 ಸ್ವಚ್ಛಮೇವ ಜಯತೆಯ ಒಂದು ಭಾಗವಾಗಿ ಘನ ತ್ಯಾಜ್ಯ ನಿರ್ವಹಣೆ ಮತ್ತು ವಿಲೇವಾರಿಯನ್ನು ವೈಜ್ಞಾನಿಕವಾಗಿ ಮಾಡಲು ಹಾಗೂ ಘನ ತ್ಯಾಜ್ಯ ನಿರ್ವಹಣೆ ಯೋಜನೆಯನ್ನು ಪರಿಣಾಮಕಾರಿಯಾಗಿ ಕೈಗೊಳ್ಳುವುದು ಹಾಗೂ ಈ ವ್ಯವಸ್ಥೆಯನ್ನು ಎಲ್ಲಾ ಗ್ರಾಮೀಣ ಪ್ರದೇಶಗಳಲ್ಲಿ ಜಾರಿಗೊಳಿಸುವ ಸಲುವಾಗಿ ಆಯ್ದ ಗ್ರಾಮಗಳಲ್ಲಿ ಸೂಕ್ತ ಭೂಮಿಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು

ಗುರುತಿಸುವುದು ಹಾಗೂ ಜಿಲ್ಲಾಧಿಕಾರಿಗಳು ಅಂತಹ ಲಭ್ಯ ಭೂಮಿಯನ್ನು ಆದ್ಯತೆಯ ಮೇರೆಗೆ ಒದಗಿಸುವುದು

25 ಜೂನ್-20ರೊಳಗಾಗಿ ಎಲ್ಲಾ ಗ್ರಾಮ ಪಂಚಾಯ್ತಿಗಳು ತಮ್ಮ ಕ್ರಿಯಾ ಯೋಜನೆಯನ್ನು ತಯಾರಿಸಿ ಸಲ್ಲಿಸಲು ಕ್ರಮವಹಿಸುವುದು.

***ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ***

26 ಮುಖ್ಯ ಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನುರಿತ ತರಬೇತಿದಾರರನ್ನು ನೇಮಿಸಿ ಗುಣಮಟ್ಟದ ಕೌಶಲ್ಯ ಅಭಿವೃದ್ಧಿ ತರಬೇತಿಯನ್ನು ನೀಡಿ, ಯುವಕರಿಗೆ ಉದ್ಯೋಗ ಕೊಡಿಸಲು ಅವಕಾಶ ಕಲ್ಪಿಸಲು ಕ್ರಮವಹಿಸುವುದು

***ಸಮಾಜ ಕಲ್ಯಾಣ ಇಲಾಖೆ***

27 ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯ / ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿಗೆ ಸಂಬಂಧಿಸಿದಂತೆ ಮೆರಿಟ್ ವಿದ್ಯಾರ್ಥಿಗಳಿಗೆ ಆದ್ಯತೆ ನೀಡುವುದು ಹಾಗೂ ಸದರಿ ನಿಲಯಗಳಲ್ಲಿ ಈಗಾಗಲೇ ನಿಗಧಿಪಡಿಸಿ ಸೀಮಿತಗೊಳಿಸಲಾಗಿರುವ ಸಂಖ್ಯೆಯಷ್ಟು ಮಾತ್ರ ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳುವುದು

28 ಸ್ವಂತ ಕಟ್ಟಡ ಹೊಂದಲು ನಿವೇಶನವನ್ನು ಗುರುತಿಸಲು ಹಾಗೂ ಮುಂದಿನ 2 ವರ್ಷಗಳಲ್ಲಿ "ಬಿ" ಮತ್ತು "ಸಿ" ವರ್ಗದಲ್ಲಿರುವ ವಿದ್ಯಾರ್ಥಿ ನಿಲಯಗಳನ್ನು "ಎ" ವರ್ಗಕ್ಕೆ ಉನ್ನತೀಕರಿಸಲು ಸೂಚಿಸಿದೆ.

29 ಗಂಗಾ ಕಲ್ಯಾಣ ಯೋಜನೆಯಡಿ ಕೊರೆದಿರುವ ಕೊಳವೆಬಾವಿಗಳಿಗೆ ವಿದ್ಯುದ್ದೀಕರಣಕ್ಕೆ ಎಸ್ಕಾಂ ಮತ್ತು ನಿಗಮಗಳಲ್ಲಿ 16,365 ಪ್ರಕರಣಗಳು ಬಾಕಿ ಇರುವುದನ್ನು ಗಮನಿಸಿದೆ ಸಮಾಜ ಕಲ್ಯಾಣ ಇಲಾಖೆಯು ಸಭೆಗೆ ನೀಡಿದ ಮಾಹಿತಿಗೂ ಹಾಗೂ ಇಂಧನ ಇಲಾಖೆಯು ನೀಡಿದ ಮಾಹಿತಿಗೂ ಬಹಳಷ್ಟು ವ್ಯತ್ಯಾಸವಿದ್ದು, ವಿದ್ಯುದ್ದೀಕರಣಕ್ಕೆ ಬಾಕಿಯಿರುವ ಕೊಳವೆಬಾವಿಗಳ ಪಟ್ಟಿಯನ್ನು ಪುನರ್ ಪರಿಶೀಲಿಸಲು ಸೂಚಿಸಿದೆ. ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ ಮತ್ತು ಅಲ್ಪ ಸಂಖ್ಯಾತ ಕಲ್ಯಾಣ ಇಲಾಖೆಗಳು ವಿದ್ಯುತ್ ಪ್ರಸರಣ ನಿಗಮದ ಅಧಿಕಾರಿಗಳೊಂದಿಗೆ ಅವರ ಮುಖ್ಯ ಕಾರ್ಯದರ್ಶಿಗಳು ಸಭೆ ಜರುಗಿಸಿ ಈ ಅಂಕಿ-ಅಂಶಗಳನ್ನು ಜೂನ್-20ರೊಳಗೆ ಮರುಪರಿಶೀಲಿಸಿ ಕ್ರೋಢೀಕೃತ ಅಂಕಿ-ಅಂಶಗಳನ್ನು ಸಿದ್ಧಪಡಿಸುವಂತೆ ಹಾಗೂ ಕೊಳವೆ ಬಾವಿಗಳ ವಿದ್ಯುದ್ದೀಕರಣ ಕಾಮಗಾರಿಗಳನ್ನು ಸಂಪೂರ್ಣಗೊಳಿಸುವಡೆ ಗಮನಹರಿಸುವಂತೆ ಸೂಚಿಸಿದೆ

30 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ಮಂಜೂರು ಮಾಡಲು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಯೊಂದಿಗೆ ಆಧಾರ್ ಸೀಡಿಂಗ್ ಆಗಬೇಕಿದ್ದು, ಜೂನ್ ಅಂತ್ಯದೊಳಗೆ ಈ ಕಾರ್ಯವನ್ನು ಪೂರ್ಣಗೊಳಿಸುವುದು

31 ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಕಡ್ಡಾಯವಾಗಿ ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ಅಲ್ಲಿನ ಆಹಾರದ ಗುಣಮಟ್ಟ, ಸ್ವಚ್ಛತೆ, ವಿದ್ಯಾರ್ಥಿಗಳಿಗೆ ನೀಡುವ ಸೌಲಭ್ಯಗಳು ಹಾಗೂ ಮೂಲಭೂತ ಸೌಕರ್ಯಗಳ ಬಗ್ಗೆ ಪರಿಶೀಲನೆ ನಡೆಸಬೇಕು. ಕೆಲವು ಹಾಸ್ಟೆಲ್‌ಗಳಲ್ಲಿ ಅನಧಿಕೃತವಾಗಿ ಕೆಲವರು ಉಳಿದುಕೊಳ್ಳುತ್ತಿದ್ದು, ಇದಕ್ಕೆ ಕಡಿವಾಣ ಹಾಕಬೇಕು

32 SCSP / TSP ಯೋಜನೆಗಳಡಿ ಕಾರ್ಯಕ್ರಮಗಳನ್ನು ನಿಯಮಿತವಾಗಿ ಪ್ರಗತಿ ಪರಿಶೀಲನೆ ನಡೆಸಲು ಸೂಚಿಸಿದೆ

***ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ***

33 ಸಮುದಾಯ ಭವನಗಳನ್ನು ನಿರ್ಮಾಣ ಮಾಡಲು ಹಾಗೂ ಗಂಗಾ ಕಲ್ಯಾಣ ಯೋಜನೆಯಡಿ ಬಾಕಿ ಇರುವ ಅರ್ಜಿಗಳನ್ನು ಇತ್ಯರ್ಥಗೊಳಿಸಲು ಕ್ರಮ ಕೈಗೊಳ್ಳುವುದು

***ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ***

34 ಮುಖ್ಯಮಂತ್ರಿಯವರ ಅಭಿವೃದ್ಧಿ ಯೋಜನೆಯಡಿ ಮಂಜೂರಾದ 4091 ಕಾಮಗಾರಿಗಳಲ್ಲಿ 1388 ಕಾಮಗಾರಿಗಳು ಇನ್ನೂ ಪ್ರಾರಂಭವಾಗಿರುವುದಿಲ್ಲ. ಜೂನ್ ಮಾಹೆಯ ಅಂತ್ಯದೊಳಗೆ ಕಾಮಗಾರಿಗಳನ್ನು ಆರಂಭಿಸುವಂತೆ ಸೂಚಿಸಿದೆ

35 ವಕ್ಫ್ ಆಸ್ತಿಗಳ ಸರ್ವೇ ಕಾರ್ಯವನ್ನು ಆದಷ್ಟು ಶೀಘ್ರವಾಗಿ ಕೈಗೊಂಡು ಸರ್ಕಾರಕ್ಕೆ ಜಿಲ್ಲಾವಾರು ವರದಿ ಸಲ್ಲಿಸುವುದು, ನ್ಯಾಯಾಲಯಗಳಲ್ಲಿ ಬಾಕಿ ಇರುವ ವಕ್ಫ್ ಆಸ್ತಿಗಳ ಪರಬಾರೆ ಹಾಗು ಖಾತೆ ಬದಲಾವಣೆ ಪ್ರಕರಣಗಳನ್ನು ಕಾಲ ಮಿತಿಯೊಳಗೆ ಮಾಡುವುದು. ಖಬರಸ್ತಾನ ಇಲ್ಲದಿರುವ ಕಡೆ ಸರ್ಕಾರಿ ಭೂಮಿಯನ್ನು ಖರೀದಿ ಮಾಡಲು ಕ್ರಮ ಕೈಗೊಳ್ಳುವುದು

36. ವಿವಿಧ ಜಿಲ್ಲೆಗಳಲ್ಲಿ ನಿರ್ಮಿಸಲು ಉದ್ದೇಶಿಸಿರುವ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಅಗತ್ಯ ಅನುದಾನಕ ಶೇಕಡ 75 ರಷ್ಟನ್ನು ಬಿಡುಗಡೆ ಮಾಡಲಾಗುವುದು. ಕೂಡಲೇ ಅಲ್ಪಾವಧಿ ಟೆಂಡರ್ ಕರೆದು ಕಾಮಗಾರಿಗಳಿಗೆ ಚಾಲನೆ ನೀಡುವುದು.

## ವಸತಿ ಇಲಾಖೆ

37. ಮುಖ್ಯಮಂತ್ರಿಗಳ ಬಹುಮಹಡಿ ಕಟ್ಟಡ ನಿರ್ಮಾಣ ಯೋಜನೆಯಡಿ ನಗರ ಪ್ರದೇಶಗಳಲ್ಲಿ ಬಹುಮಹಡಿ ವಸತಿ ಸಂಕೀರ್ಣ ನಿರ್ಮಿಸಿ ವಸತಿ ಸೌಲಭ್ಯವನ್ನು ಕಲ್ಪಿಸಲು ಜಮೀನುಗಳನ್ನು ಗುರುತಿಸಲು ಕ್ರಮವಹಿಸುವುದು.

38 ದಾವಣಗೆರೆ ಜಿಲ್ಲೆಯ ಅತ್ತಿಗೆರೆ ಗ್ರಾಮದಲ್ಲಿ ಖಾಸಗಿ ಜಮೀನಿನಲ್ಲಿ ಹಲವು ಬಡ ದಲಿತ ಕುಟುಂಬಗಳು ಬಹಳ ವರ್ಷಗಳಿಂದ ವಾಸವಾಗಿದ್ದು, ತಮ್ಮ ಸಮಸ್ಯೆಯ ಕುರಿತು ಮುಖ್ಯಮಂತ್ರಿಯವರಿಗೆ 12 ವರ್ಷದ ಹಿಂದೆ ಜನತಾ ದರ್ಶನದಲ್ಲಿ ಮನವಿ ಸಲ್ಲಿಸಿದ್ದರು. ಈ ಸಮಸ್ಯೆ ಬಗೆಹರಿದಿಲ್ಲವೆಂದು ಈಗ ಮತ್ತೆ ಮನವಿಯನ್ನು ಸಲ್ಲಿಸಿದ್ದಾರೆ ಖಾಸಗಿ ಜಮೀನನ್ನು ಸ್ವಾಧೀನಪಡಿಸಿಕೊಳ್ಳುವ ಮೂಲಕ ಅಥವಾ ಪರ್ಯಾಯ ಜಮೀನನ್ನು ಗುರುತಿಸುವ ಮೂಲಕ ವಾಸಕ್ಕೆ ಅನುವುಮಾಡಿಕೊಡಲು ಕ್ರಮ ಕೈಗೊಳ್ಳುವುದು

## ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ

39 ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ ಮತ್ತು ಎಲ್ಲಾ ಪಡಿತರ ಚೀಟಿದಾರರ ಮಾಹಿತಿಯನ್ನು ಗಣಕೀಕರಣಗೊಳಿಸಿ ಆಧಾರ್ ಸಂಖ್ಯೆಯೊಂದಿಗೆ ಜೋಡಣೆ ಕಾರ್ಯವನ್ನು ಇನ್ನು 2 ತಿಂಗಳೊಳಗಾಗಿ ಮುಕ್ತಾಯಗೊಳಿಸುವಂತೆ ಸೂಚಿಸಿದೆ ಇದರೊಂದಿಗೆ ಬಿ.ಪಿ.ಎಲ್ ಕಾರ್ಡ್ ಹೊಂದಿರುವ ಕುಟುಂಬದ ಸಂಖ್ಯೆಯನ್ನು ಪುನರ್ ಪರಿಶೀಲಿಸುವುದು.

## ಸಾರಿಗೆ ಇಲಾಖೆ

40 ಸುಪ್ರೀಂ ಕೋರ್ಟ್ ಆದೇಶದ ಪ್ರಕಾರ ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ರಚಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿಯೂ ಸಹ ಜಿಲ್ಲಾ ರಸ್ತೆ ಸುರಕ್ಷತಾ ಪ್ರಾಧಿಕಾರವನ್ನು ರಚಿಸಲಾಗಿದ್ದು, ಕಾಲಕಾಲಕ್ಕೆ ಸಭೆಗಳನ್ನು ನಡೆಸಿ ರಸ್ತೆ ಸುರಕ್ಷತಾ ಪಾಲುದಾರಿಕೆ ಇಲಾಖೆಗಳ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಹಾಗೂ ಮಾಸಿಕ ಗುರಿಯನ್ನು ನಿಗಧಿಪಡಿಸಲು ಕ್ರಮ ಕೈಗೊಳ್ಳುವುದು

41 ಮೋಟಾರ್ ವಾಹನ ಕಾಯ್ದೆಯಡಿ ಗರಿಷ್ಠ ದಂಡವನ್ನು ವಿಧಿಸಲು ಅಧಿಸೂಚನೆ ಹೊರಡಿಸಲಾಗಿದ್ದು, ಅದರಂತೆ ರಸ್ತೆ ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸುವ ವಾಹನಗಳು ಮತ್ತು ವ್ಯಕ್ತಿಗಳ ವಿರುದ್ಧ ಕಟ್ಟು-ನಿಟ್ಟಿನ ಕ್ರಮವಹಿಸುವಂತೆ ಸೂಚಿಸಿದೆ ವೈಜ್ಞಾನಿಕವಾಗಿ ರಸ್ತೆ ಸುರಕ್ಷತಾ ಕ್ರಮವನ್ನು ಕೈಗೊಳ್ಳುವುದು. ಸರಕು ಸಾಗಾಣಿಕೆ ವಾಹನದಲ್ಲಿ ಪ್ರಯಾಣಿಕರನ್ನು ಸಾಗಿಸುವುದನ್ನು ಕಡ್ಡಾಯವಾಗಿ ರದ್ದುಗೊಳಿಸಲು ಕ್ರಮವಹಿಸುವುದು

42. ಗ್ರಾಮೀಣ ಪ್ರದೇಶ ಹಾಗೂ ಕುಗ್ರಾಮಗಳಿಗೆ ಮತ್ತು ಶಾಲಾ ಮಕ್ಕಳಿಗೆ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲು ರಾಜ್ಯ ರಸ್ತೆ ಸಾರಿಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ

ವಹಿಸುವುದು 15 ವರ್ಷ ಮೇಲ್ಪಟ್ಟ ಪ್ಯಾಸೆಂಜರ್ ವೆಹಿಕಲ್‌ಗಳಿಗೆ ಫಿಟ್ನೆಸ್ ಸರ್ಟಿಫಿಕೇಟ್ ನೀಡದಂತೆ ಸೂಚಿಸಿದೆ

***ಅರಣ್ಯ ಇಲಾಖೆ***

43. ಅರಣ್ಯ ಮತ್ತು ಕಂದಾಯ ಜಮೀನುಗಳನ್ನು ಗುರುತಿಸುವ ನಿಟ್ಟಿನಲ್ಲಿ ಈ ಎರಡೂ ಇಲಾಖೆಗಳು ಜಂಟಿ ಸರ್ವೆ ನಡೆಸಿ ಪರಿಭಾವಿತ ಅರಣ್ಯ ಪ್ರದೇಶ ಮತ್ತು ಕಂದಾಯ ಪ್ರದೇಶಗಳನ್ನು ಗುರುತಿಸಲು ಕ್ರಮ ಕೈಗೊಳ್ಳುವುದು ಹಾಗೂ ಈ ಕಾರ್ಯವನ್ನು 6 ತಿಂಗಳೊಳಾಗಿ ಪೂರ್ತಿಗೊಳಿಸಲು ಸೂಚಿಸಿದೆ ಇದರಿಂದ ಸಾರ್ವಜನಿಕ ಉಪಯೋಗಕ್ಕೆ ಕಂದಾಯ ಭೂಮಿ ಒದಗಿಸಲು ಅನುಕೂಲವಾಗಲಿದೆ

44. ರೈತರ ಜಮೀನಿನಲ್ಲಿ 3 00 ಕೋಟಿ ಸಸಿಗಳನ್ನು ನೆಡಲು ಯೋಜನೆ ರೂಪಿಸಲಾಗಿದೆ ಜುಲೈ-05 2019ರಂದು ವನ ಮಹೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಈ ಬಗ್ಗೆ ಅಧಿಕಾರಿಗಳು ಪೂರ್ವನಿಯೋಜಿತವಾಗಿ ಪ್ರದೇಶಗಳನ್ನು ಗುರುತಿಸಿಕೊಂಡು, ಸರ್ಕಾರಿ ಕಛೇರಿಗಳ ಆವರಣ, ಸ್ಕೂಲ್ ಕಾಂಪೌಂಡ್‌ಗಳಲ್ಲಿ ಸಸಿ ನೆಡುವ ಕಾರ್ಯವನ್ನು ಹಮ್ಮಿಕೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸುವುದು

45. ರಾಷ್ಟ್ರೀಯ ಹಸಿರು ನ್ಯಾಯಾಧೀಕರಣವು ರಾಜ್ಯದಲ್ಲಿ 17 ನದಿ ಪ್ರದೇಶಗಳನ್ನು ಅತ್ಯಂತ ಕಲುಷಿತ ಎಂದು ಗುರುತಿಸಿದ್ದು, ಈ ನದಿ ಪ್ರದೇಶಗಳ ಶುದ್ಧೀಕರಣಕ್ಕೆ ನಗರಾಭಿವೃದ್ಧಿ ಇಲಾಖೆಯು ಕೊಳಚೆನೀರು ಸಂಸ್ಕರಣಾ ಘಟಕ ಸ್ಥಾಪನೆ ಮತ್ತಿತರ ಪರಿಹಾರ ಕ್ರಮ ಕೈಗೊಳ್ಳಲು ಅನುಮೋದನೆ ನೀಡಿದೆ ಈ ಯೋಜನೆಗಳನ್ನು ಕಾಲಕಾಲಕ್ಕೆ ಪ್ರಗತಿ ಪರಿಶೀಲಿಸಿ 2 ವರ್ಷದೊಳಗೆ ಪೂರ್ಣಗೊಳಿಸುವುದು

***ಸಿಆಸುಇ (ಇ-ಆಡಳಿತ)***

46 ರಾಜ್ಯ ಸರ್ಕಾರವು ಸಚಿವಾಲಯದಲ್ಲಿ ಕಡತ ವಿಲೇವಾರಿಗೆ ಇ-ಆಫೀಸ್ ಯೋಜನೆಯನ್ನು ಜಾರಿಗೆ ತಂದಿರುತ್ತದೆ ಜುಲೈ ತಿಂಗಳಲ್ಲಿ ಎಲ್ಲಾ ಜಿಲ್ಲಾಧಿಕಾರಿ / ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ತಮ್ಮ ಕಛೇರಿಯಲ್ಲಿಯೂ ಇ-ಆಫೀಸ್ ಜಾರಿಗೊಳಿಸಿ ಸರ್ಕಾರಕ್ಕೆ ಇ-ಆಫೀಸ್‌ನಲ್ಲಿಯೇ ಪ್ರಸ್ತಾವನೆ ಸಲ್ಲಿಸಲು ಕ್ರಮ ಕೈಗೊಳ್ಳುವುದು

***ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ***

47 ಕರ್ನಾಟಕ ರಾಜ್ಯದಲ್ಲಿ 1 ವರ್ಷದಲ್ಲಿ ನವಜಾತ ಶಿಶುಗಳ ಮರಣ ಪ್ರಮಾಣವು (IMR) ಶೇ 28% ರಿಂದ 24%ಕ್ಕೆ ಇಳಿದಿರುತ್ತದೆ. ಭಾರತ ದೇಶದಲ್ಲಿ ನವಜಾತ ಶಿಶುಗಳ ಮರಣ ಪ್ರಮಾಣವನ್ನು ತ್ವರಿತಗತಿಯಲ್ಲಿ ಕಡಿಮೆಗೊಳಿಸುವಲ್ಲಿ ಯಶಸ್ಸು ಕಂಡಿರುವ ರಾಜ್ಯಗಳಲ್ಲಿ ಕರ್ನಾಟಕ ರಾಜ್ಯವು 2ನೇ ಸ್ಥಾನದಲ್ಲಿರುತ್ತದೆ

48. ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡುವ ಸಲುವಾಗಿ ತಜ್ಞ ಖಾಸಗಿ ವೈದ್ಯರನ್ನು on-call ಆಧಾರದಲ್ಲಿ ನೇಮಕ ಮಾಡಿಕೊಳ್ಳಲು ಕ್ರಮ ವಹಿಸುವುದು. ನೇಮಿಸ್ಪಟ್ಟ ತಜ್ಞ ವೈದ್ಯರ ಭತ್ಯೆಗಳನ್ನು ಪರಿಸ್ಥಿತಿಗನುಗುಣವಾಗಿ ನಿಗಧಿಪಡಿಸುವ ಅಧಿಕಾರವನ್ನು ಜಿಲ್ಲಾಧಿಕಾರಿಗಳಿಗೆ ನೀಡಲಾಗಿದೆ.

49 ಪ್ರಸೂತಿ ಸಮಯದಲ್ಲಿ ತಾಯಂದಿರು ಹಾಗೂ ಶಿಶು ಮರಣ ಪ್ರಮಾಣವನ್ನು ಕಡಿಮೆ ಮಾಡಲು ಲಕ್ಷ್ಯ ಯೋಜನೆಯಡಿ ಗಮನ ಹರಿಸಬಹುದಾದ 300 ಅಂಶಗಳ ಕುರಿತಂತೆ ಅಗತ್ಯ ಕ್ರಮ ವಹಿಸುವುದು, ಹಾಗೂ ಶಿಶು ಜನನದ ನಂತರ ಆಶಾ ಕಾರ್ಯಕರ್ತೆಯರು 3 ತಿಂಗಳೊಳಗೆ 7 ಬಾರಿ ಮನೆಗೆ ಭೇಟಿ ನೀಡಿ ಮಗುವಿನ ಆರೋಗ್ಯ ಹಾಗೂ ಬೆಳವಣಿಗೆಯ ಬಗ್ಗೆ ಮಾಹಿತಿ ಸಂಗ್ರಹಿಸುವುದು

### ಕೃಷಿ ಇಲಾಖೆ

50 ರೈತರ ಆತ್ಮಹತ್ಯೆ ಪ್ರಕರಣ ಕಳೆದ ಬಾರಿಗಿಂತ ಈ ಬಾರಿ ಕಡಿಮೆಯಾಗಿದ್ದು, ಈ ಬಾರಿ 940 ಪ್ರಕರಣಗಳು ವರದಿಯಾಗಿವೆ. 678 ಪ್ರಕರಣಗಳಲ್ಲಿ ರೂ.5.00 ಲಕ್ಷ ಪರಿಹಾರ ನೀಡಲಾಗಿದೆ 44 ಪ್ರಕರಣಗಳು ಬಾಕಿ ಉಳಿದಿವೆ. ಇದನ್ನು ತ್ವರಿತವಾಗಿ ವಿಲೇವಾರಿ ಮಾಡುವುದು.ಮೃತ ರೈತರ ಕುಟುಂಬಕ್ಕೆ ನೀಡುವ ಪಿಂಚಣಿ, ಶಿಕ್ಷಣ ಮತ್ತು ಆರೋಗ್ಯ ಸೌಲಭ್ಯಗಳನ್ನು ಒದಗಿಸಲು ಸಹ ಕ್ರಮ ಕೈಗೊಳ್ಳುವುದು.

51 ಪ್ರಧಾನಮಂತ್ರಿ ಕಿಸಾನ್ ಯೋಜನೆಯಡಿ ಸಣ್ಣ ಮತ್ತು ಅತೀ ಸಣ್ಣ ರೈತರಿಗೆ ವರ್ಷಕ್ಕೆ 6,000/- ಧನ ಸಹಾಯ ನೀಡಲಾಗುತ್ತಿದ್ದು, ಅದನ್ನು ರೈತರಿಗೆ ಒದಗಿಸುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಒಂದು ಸಮಿತಿ ರಚನೆ ಮಾಡಿ ಕ್ಷೇತ್ರ ಅಧಿಕಾರಿಗಳನ್ನು ನೇಮಿಸಿ ಅವರಿಗೆ ಗುರಿ ನಿಗಧಿಪಡಿಸುವುದು.

52. ಬೆಳೆ ವಿಮೆ ಮರುಪಾವತಿಗಾಗಿ ಪರಿಷ್ಕೃತ ಮಾರ್ಗಸೂಚಿಯನ್ನು ಹೊರಡಿಸುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಕ್ರಮ ಕೈಗೊಳ್ಳುವುದು.

### ತೋಟಗಾರಿಕೆ ಇಲಾಖೆ

53 ತೋಟಗಾರಿಕೆ ಇಲಾಖೆಯ ಸ್ವಾಧೀನದ ಕೆಲ ಪ್ರದೇಶವು ಬೇರೆ ಇಲಾಖೆಗಳ ಹೆಸರಿನಲ್ಲಿದ್ದು, ಅದನ್ನು ಎಲ್ಲಾ ತಹಶೀಲ್ದಾರರುಗಳ ನೇತೃತ್ವದಲ್ಲಿ ಕಂದಾಯ ಅದಾಲತ್ ಮಾದರಿಯಲ್ಲಿ ತೋಟಗಾರಿಕೆ ಇಲಾಖೆಯ ಸ್ವಾಧೀನಕ್ಕೆ ತರಲು ಕ್ರಮ ಕೈಗೊಳ್ಳುವುದು ಮತ್ತು ಒತ್ತುವರಿಯಾದ ಪ್ರದೇಶವನ್ನು ತೆರವುಗೊಳಿಸಲು ಕ್ರಮವಹಿಸುವುದು

54 ಕೆಮ್ಮಣ್ಣುಗುಂಡಿ ಗಿರಿಧಾಮದಲ್ಲಿ ರಸ್ತೆ ನಿರ್ಮಾಣದ ಕಾರ್ಯವನ್ನು ಅರಣ್ಯ ಇಲಾಖೆಗೆ ವಹಿಸಿ ಪೂರ್ಣಗೊಳಿಸಲು ಕ್ರಮವಹಿಸುವುದು

## ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

55 ಕಾಂಪಿಟ್ ವಿತ್ ಚೈನಾ ವಿವಿಧ ಜಿಲ್ಲೆಗಳಲ್ಲಿ ಕೈಗಾರಿಕಾ ಕ್ಲಸ್ಟರ್‌ಗಳ ಸ್ಥಾಪನೆಯ ಯೋಜನೆಯಡಿ ಕೈಗಾರಿಕಾ ಸ್ಥಾಪನೆಗೆ ಭೂಮಿ ಒದಗಿಸಲು ಭೂ ಪರಿವರ್ತನೆಯನ್ನು ಆದ್ಯತೆಯ ಮೇಲೆ ಪರಿಶೀಲಿಸಿ ಜಿಲ್ಲಾಧಿಕಾರಿಗಳು ತಮ್ಮ ಹಂತದಲ್ಲಿ ಏಕ ಗವಾಕ್ಷಿ ಸಭೆಯನ್ನು ನಿಯಮಿತವಾಗಿ ಜರುಗಿಸಿ ಉದ್ಯೋಗ ಸ್ಥಾಪನೆಗೆ ಉತ್ತೇಜನ ನೀಡುವುದು

56 ಕೈಗಾರಿಕೋದ್ಯಮಿಗಳೊಂದಿಗೆ ಚರ್ಚಿಸಿ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತುಕೊಳ್ಳುವಲ್ಲಿ ಸಹಕರಿಸುವ ನಿಟ್ಟಿನಲ್ಲಿ ಅವರುಗಳ ಮನೊಲಿಸಿ ಅಗತ್ಯವಿರುವ Corporate Social Responsibility(CSR) Fund ಗಳನ್ನು ಸಂಗ್ರಹಿಸಲು ಕ್ರಮವಹಿಸುವುದು

57 ಜಿಲ್ಲೆಗಳಲ್ಲಿ ಕೆಲಸ-ಕಾರ್ಯಗಳ ಸರಳೀಕರಣ (ease of doing business)ನ್ನು ಸುಧಾರಿಸುವ ನಿಟ್ಟಿನಲ್ಲಿ ಅಗತ್ಯವಿರುವ ಸಕ್ರಿಯ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವಂತೆ ಸೂಚಿಸಿದೆ.

58 ಸಕ್ಕರೆ ಕಾರ್ಖಾನೆಗಳಿಂದ ಶೇ 90 ರಷ್ಟು ಕಬ್ಬಿನ ದರ ಪಾವತಿಯಾಗಿದೆ ಬಾಕಿ ಉಳಿಸಿಕೊಂಡಿರುವ ಕಬ್ಬಿನದ ದರದ ಬಗ್ಗೆ ಸಕ್ಕರೆ ಕಾರ್ಖಾನೆಗಳ ಸಭೆ ಕರೆದು ಬಾಕಿ ಮೊತ್ತ ಪಾವತಿಗೆ ಕ್ರಮವಹಿಸುವುದು

59 ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷದ ಪ್ರವಾಹದಿಂದಾಗಿ ಜಿಲ್ಲೆಯಾದ್ಯಂತ ಸಂಗ್ರಹವಾಗಿರುವ ಮರಳನ್ನು ಬಳಕೆ ಮಾಡುವ ಬಗ್ಗೆ ತಪಾಸಣೆ ನಡೆಸಲು ಒಂದು ತಂಡವನ್ನು ಕಳುಹಿಸುವ ವ್ಯವಸ್ಥೆಯನ್ನು ಮಾಡುವುದು.

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

60 ಮಾತೃಪೂರ್ಣ ಯೋಜನೆಯಡಿ ಕಾಲಕಾಲಕ್ಕೆ ಅಂಗನವಾಡಿ ಕೇಂದ್ರಗಳ ಪರಿವೀಕ್ಷಣೆ ಕೈಗೊಂಡು ಮಕ್ಕಳ ಹಾಜರಾತಿ ಮತ್ತು ಆಹಾರ ವಿತರಣೆ ಕುರಿತು ಪರಿಶೀಲಿಸುವುದು ಹಾಗೆಯೇ, ಅಂಗನವಾಡಿ ಕೇಂದ್ರಗಳಿಗೆ ಬಯೋಮೆಟ್ರಿಕ್ ಅಳವಡಿಸುವ ಬಗ್ಗೆ ಪರಿಶೀಲಿಸುವುದು

61 ಮಹಿಳೆಯರ ಮತ್ತು ಮಕ್ಕಳಿಗಾಗಿ ಇರುವ ವಿಶೇಷಾ ಚಿಕಿತ್ಸಾ (ಗೆಳತಿ) ಘಟಕಗಳನ್ನು ಆಸ್ಪತ್ರೆಗಳಲ್ಲಿ ಹೊರರೋಗಿ ವಿಭಾಗದ ಪಕ್ಕದಲ್ಲಿಯೇ ಸ್ಥಾಪಿಸಲು ಕ್ರಮ ವಹಿಸುವುದು

62 ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯಡಿ ನೀಡುವ ಸೌಲಭ್ಯಗಳನ್ನು ಫಲಾನುಭವಿಗಳಿಗೆ ಆಧ್ಯತೆಯ ಮೇರೆಗೆ ನೀಡಲು ಕ್ರಮವಹಿಸುವುದು ಅಂಗನವಾಡಿ

ಕಾರ್ಯಕರ್ತೆಯರು ಮತ್ತು ಸಹಾಯಕರು ನಿವೃತ್ತಿಹೊಂದುವ 3 ತಿಂಗಳು ಮುಂಚಿತವಾಗಿಯೇ ಹುದ್ದೆಯನ್ನು ಭರ್ತಿಮಾಡಲು ಕ್ರಮಕೈಗೊಳ್ಳುವುದು ಅಂಗನವಾಡಿ ಕಟ್ಟಡಗಳ ಕಾಮಗಾರಿಗಳನ್ನು ಶೀಘ್ರವಾಗಿ ಮುಕ್ತಾಯಗೊಳಿಸುವುದು.

III ಸಭೆಯ ಕಾರ್ಯಸೂಚಿಯ ಪ್ರಕಾರ ವಿವಿಧ ಇಲಾಖಾ ಪ್ರಗತಿ ಪರಿಶೀಲನೆ ಬಗ್ಗೆ ವಿಸ್ತೃತವಾಗಿ ಚರ್ಚಿಸಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಈ ಕೆಳಕಂಡಂತೆ ಸೂಚನೆ ನಿರ್ದೇಶನಗಳನ್ನು ನೀಡಿದೆ

**ಕಂದಾಯ ಇಲಾಖೆ**

63 ಕರ್ನಾಟಕ ಭೂ ಸುಧಾರಣಾ ಕಾಯ್ದೆ ನಿಯಮ 109ರಡಿ ಸ್ವೀಕೃತಗೊಂಡ ಅರ್ಜಿಗಳನ್ನು ಸಂಪರ್ಕರಹಿತವಾಗಿ ಹಾಗೂ ನಗದು ರಹಿತವಾಗಿ ಪ್ರಕ್ರಿಯೆಗೊಳಿಸುವ ಸಲುವಾಗಿ ಶೀಘ್ರವಾಗಿ ಆನ್‌ಲೈನ್ ವ್ಯವಸ್ಥೆಯನ್ನು ಸರ್ಕಾರದ ವತಿಯಿಂದ ಕಡ್ಡಾಯಗೊಳಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಲಾಯಿತು.

64 ಹೊಸ ತಾಲ್ಲೂಕುಗಳ ಕಾರ್ಯಾರಂಭದ ಪ್ರಗತಿಗೆ ಸಂಬಂಧಿಸಿದಂತೆ ಸರ್ಕಾರದ ಮಟ್ಟದಲ್ಲಿ ಸಭೆ ನಡೆಸಲು ಕ್ರಮವಹಿಸುವುದು.

65 ನ್ಯಾಯಾಲಯದಲ್ಲಿ ಬಾಕಿಯಿರುವ ಕಂದಾಯ ಪ್ರಕರಣಗಳಿಗೆ (Revenue Court cases) ಸಂಬಂಧಿಸಿದಂತೆ ಪರಿಶೀಲನಾ ಸಭೆಯನ್ನು ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ನಡೆಸಿ ಅಂತಹ ಪ್ರಕರಣಗಳ ಶೀಘ್ರ ವಿಲೇವಾರಿಗಾಗಿ ಅಗತ್ಯ ಸೂಚನೆಗಳನ್ನು ನೀಡಲಾಗುವುದು ಹಾಗೂ ಇದಕ್ಕೆ ಸಂಬಂಧಿಸಿದಂತೆ ತೆಲಂಗಾಣ ರಾಜ್ಯದಲ್ಲಿ ಪ್ರಚಲಿತವಿರುವ ಪ್ರಕ್ರಿಯೆಯ ಬಗ್ಗೆ ಅಧ್ಯಯನ ನಡೆಸಿ ಒಳ್ಳೆಯ ಅಂಶಗಳನ್ನು ಅಳವಡಿಸಿಕೊಳ್ಳಲು ಸೂಚಿಸಲಾಯಿತು

**(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕಂದಾಯ ಇಲಾಖೆ)**

**ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ**

66 ಅಲ್ಪ ಸಂಖ್ಯಾತ ಕಲ್ಯಾಣ ಇಲಾಖೆಯು ವಕ್ಫ್ ಆಸ್ತಿಗಳಿಗೆ ಸಂಬಂಧಿಸಿದ ಅಧಿಸೂಚನೆಯನ್ನು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಒದಗಿಸುವಂತೆ ಸೂಚಿಸಿದೆ

67. ಅಲ್ಪ ಸಂಖ್ಯಾತ ಕಲ್ಯಾಣ ಇಲಾಖೆಯ ಅಲ್ಪಾವಧಿ ಟೆಂಡರ್ ಗಳಿಗೆ ಅನುಮೋದನೆ ನೀಡುವ ಅಧಿಕಾರವನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ನೀಡುವಂತೆ ಮುಖ್ಯ ಕಾರ್ಯದರ್ಶಿಯವರು ಪ್ರಧಾನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರಿಗೆ ತಿಳಿಸಿದರು

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ)**

**ಯೋಜನಾ ಇಲಾಖೆ**

68. ಹೈದರಾಬಾದ್-ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಯ ಕೆಲಸ-ಕಾರ್ಯಗಳನ್ನು ತೀವ್ರಗೊಳಿಸಲು ಪ್ರಸ್ತುತ ಖಾಲಿಯಿರುವ ಹುದ್ದೆಗಳನ್ನು ಹೊರಗುತ್ತಿಗೆ / ಗುತ್ತಿಗೆ ಆಧಾರದಡಿ ಮತ್ತು ನಿವೃತ್ತ ನೌಕರರಿಂದ ಭರ್ತಿಮಾಡಲು ಅಗತ್ಯ ಪರವಾನಗಿ ನೀಡಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು

69 ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಶಿಕ್ಷಣ ಹಾಗೂ ಆರೋಗ್ಯ ಕಾಮಗಾರಿಗಳಿಗೆ ಶೇ10 ರಷ್ಟು ಅನುದಾನವನ್ನು ಕಡ್ಡಾಯವಾಗಿ ಮೀಸಲಿಡುವ ಬಗ್ಗೆ ಹಾಗೂ ಪ್ರತೀ ವಿಧಾನಸಭಾ ಕ್ಷೇತ್ರಗಳಿಗೆ ನೀಡುವ ಅನುದಾನಕ್ಕೆ ಸಂಬಂಧಿಸಿದಂತೆ ಕ್ರಿಯಾ ಯೋಜನೆಯನ್ನು ಒಂದೇ ಬಾರಿ ತಯಾರಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ)**

**ವಸತಿ ಇಲಾಖೆ**

70 ಮಾನ್ಯ ಮುಖ್ಯಮಂತ್ರಿಗಳ ಬಹುಮಹಡಿ ಕಟ್ಟಡ ನಿರ್ಮಾಣ ಯೋಜನೆಯಡಿ ನಗರ ಪ್ರದೇಶಗಳಲ್ಲಿ ಬಹುಮಹಡಿ ವಸತಿ ಸಂಕೀರ್ಣ ಪ್ರಗತಿಯ ಬಗ್ಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಮುಂದಿನ ತಿಂಗಳು ಪುನರ್ ಪರಿಶೀಲನೆ ಮಾಡುವಂತೆ ಸೂಚಿಸಿದ

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆ)**

**ಸಾರಿಗೆ ಇಲಾಖೆ**

71 ಗ್ರಾಮೀಣ ಪ್ರದೇಶ ಹಾಗೂ ಕುಗ್ರಾಮಗಳಿಗೆ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲು ರಾಜ್ಯ ರಸ್ತೆ ಸಾರಿಗೆ ಅಧಿಕಾರಿಗಳೊಂದಿಗೆ ಚರ್ಚಿಸಲು ಪ್ರತ್ಯೇಕವಾಗಿ ಸಭೆಯನ್ನು ಕರೆಯಲು ಕ್ರಮ ಕೈಗೊಳ್ಳುವುದು.

**(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಾರಿಗೆ ಇಲಾಖೆ)**

ಈ ಸಭೆಯಲ್ಲಿ ನೀಡಿರುವ ಎಲ್ಲಾ ಸಲಹೆ / ಸೂಚನೆ / ನಿರ್ದೇಶನಗಳನ್ನು ಚಾಚೂ ತಪ್ಪದೇ ಪಾಲಿಸಿ ಮುಂದೆ ನಡೆಯುವ ಸಭೆಯೊಳಗೆ ಅಧಿಕಾರಿಗಳು ಹೆಚ್ಚಿನ ಪ್ರಗತಿ ಸಾಧಿಸಿರುತ್ತಾರೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸುತ್ತಾ, ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು

ಕಡತ ಸಂ ಸಿಆಸುಇ 07 ಗಕಾಸ 2019
ದಿನಾಂಕ. -06-2019

(ಹೆಚ್.ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ